## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರುಗಳ ಹುದ್ದೆಗಳನ್ನು ಭರ್ತಿ ಮಾಡಲು ಆಯ್ಕೆ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಒಇ 440 ಪಿಪಿಇ 2017 ದಿನಾಂಕ: 08/01/2018.
2. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ಸಂಖ್ಯೆ: ಡಿಪಿಎನ್/ಸಿಸಾ-1ಎ/47/2015-16, ದಿ: 29/5/2018.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರುಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈ ಕೆಳಕಂಡಂತೆ ಆಯ್ಕೆ ಸಮಿತಿಯನ್ನು ಪುನರ್ ರಚಿಸಿ ಆದೇಶ ಹೊರಡಿಸಲಾಗಿತ್ತು.

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,<br>ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು : ಅಧ್ಯಕ್ಷರು

2) ಸರ್ಕಾರದ ಪ್ರಧಾನ ಕಾರ್ಯದರ್ಶಿ,<br>ಒಳಾಡಳಿತ ಇಲಾಖೆ (ಸೆರೆಮನೆ, ಅಪರಾಧಗಳು ಮತ್ತು ಸಹಾಯಕ ಸೇವೆಗಳು), ವಿಧಾನಸೌಧ, ಬೆಂಗಳೂರು : ಸದಸ್ಯರು

3) ಸರ್ಕಾರದ ಪ್ರಧಾನ ಕಾರ್ಯದರ್ಶಿ,<br>ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು. : ಸದಸ್ಯರು

4) ಸರ್ಕಾರದ ಕಾರ್ಯದರ್ಶಿ,<br>ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು : ಸದಸ್ಯರು

5) ರಿಜಿಸ್ಟ್ರಾರ್ ಜುಡಿಷಿಯಲ್,<br>ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು : ಸದಸ್ಯರು

6) ಶ್ರೀ ಕೆ. ರುದ್ರಸ್ವಾಮಿ,<br>ಅಭಿಯೋಗ ಉಪ ನಿರ್ದೇಶಕರು (ಆಡಳಿತ), ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಬೆಂಗಳೂರು : ಸದಸ್ಯ ಕಾರ್ಯದರ್ಶಿ

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ
Directorate of Prosecutions & Govt. Litigation, Bangalore
ಬೆಂಗಳೂರು.
733
14/6/18

..2

ಮೇಲೆ ಓದಲಾದ (2)ರ ಪತ್ರದಲ್ಲಿ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರು ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರುಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ದಿನಾಂಕ: 08/01/2018ರ ಸರ್ಕಾರದ ಆದೇಶ ಸಂಖ್ಯೆ: ಒಇ 440 ಪಿಪಿಇ 2017ರಲ್ಲಿ ಪುನರ್ ರಚಿಸಲಾಗಿದ್ದ ಆಯ್ಕೆ ಸಮಿತಿಯಲ್ಲಿನ ಕ್ರಮ ಸಂಖ್ಯೆ: 6ರಲ್ಲಿ ನಮೂದಿಸಿರುವ ಶ್ರೀ ಕೆ. ರುದ್ರಸ್ವಾಮಿ, ಅಭಿಯೋಗ ಉಪ ನಿರ್ದೇಶಕರು (ಆಡಳಿತ), ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಬೆಂಗಳೂರು ಇವರು ವಯೋನಿವೃತ್ತಿ ಹೊಂದಿರುವುದರಿಂದ ಇವರ ಬದಲಿಗೆ ಶ್ರೀ ಎಸ್. ಬಷೀರ್ ಅಹ್ಮದ್, ಅಭಿಯೋಗ ಉಪ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಬೆಂಗಳೂರು ಇವರನ್ನು ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಒಇ 440 ಪಿಪಿಇ 2017**
**ಬೆಂಗಳೂರು, ದಿನಾಂಕ: 11ನೇ ಜೂನ್ 2018**

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರುಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆಯ್ಕೆ ಸಮಿತಿಯನ್ನು ಈ ಕೆಳಕಂಡಂತೆ ಪುನರ್ ರಚಿಸಲಾಗಿದೆ.

| | | |
|---|---|---|
| 1) | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು | : ಅಧ್ಯಕ್ಷರು |
| 2) | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಸೆರೆಮನೆ, ಅಪರಾಧಗಳು ಮತ್ತು ಸಹಾಯಕ ಸೇವೆಗಳು), ವಿಧಾನಸೌಧ, ಬೆಂಗಳೂರು | : ಸದಸ್ಯರು |
| 3) | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು. | : ಸದಸ್ಯರು |
| 4) | ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು | : ಸದಸ್ಯರು |
| 5) | ರಿಜಿಸ್ಟ್ರಾರ್ ಜುಡಿಷಿಯಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು | : ಸದಸ್ಯರು |
| 6) | ನಿರ್ದೇಶಕರು (ಪ್ರ), ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಬೆಂಗಳೂರು | : ಸದಸ್ಯ ಕಾರ್ಯದರ್ಶಿ |

ಈ ಬಗ್ಗೆ ಪರಿಷ್ಕರಿಸಿದ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಅಭ್ಯರ್ಥಿಗಳು ಪರೀಕ್ಷೆಯನ್ನು 2 ಹಂತಗಳಲ್ಲಿ ಬರೆಯಬೇಕು, ಪರೀಕ್ಷೆಗೆ ಸಂಬಂಧಿಸಿದಂತೆ ಈ ಪೂರ್ಣ ಪ್ರಕ್ರಿಯೆಯನ್ನು ಇಂತಹ ಕೆಲಸ ನಿರ್ವಹಿಸುವುದಕ್ಕಾಗಿಯೇ ಸ್ಥಾಪಿಸಿರುವ KEA ಇವರಿಗೆ ಈ ಜವಾಬ್ದಾರಿಯನ್ನು ನೀಡುವ ಬಗ್ಗೆ ಸಹ ಮುಂದಿನ ಕ್ರಮ ವಹಿಸಲು ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎಸ್. ನಾಗರಾಜ್)
ಸರ್ಕಾರದ ಉಪ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಕಾನೂನು ಮತ್ತು ಸುವ್ಯವಸ್ಥೆ)

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಒದಗಿಸಲು ಕೋರಿದೆ.

<u>ಪ್ರತಿಯನ್ನು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಸೆರೆಮನೆ, ಅಪರಾಧಗಳು ಮತ್ತು ಸಹಾಯಕ ಸೇವೆಗಳು), ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ರಿಜಿಸ್ಟ್ರಾರ್ ಜುಡಿಷಿಯಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
6. ನಿರ್ದೇಶಕರು(ಪ್ರ), ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಸೇವಾ ನಿಯಮಗಳು), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿ (ಕಾನೂನು ಮತ್ತು ಸುವ್ಯವಸ್ಥೆ)ರವರ ಆಪ್ತ ಸಹಾಯಕರು, ಒಳಾಡಳಿತ ಇಲಾಖೆ.
10. ಶಾಖಾ ರಕ್ಷಾ ಕಡತ ಮತ್ತು ಹೆಚ್ಚುವರಿ ಪ್ರತಿ.